ದಿನಾಂಕಃ **05-03-2025** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**<u>ಪಾಟೀ ಸವಾಲುಃ</u>** ವಾದಿ ಪರ ಶ್ರೀ ಹೆಚ್ ಟಿ ಎಸ್ ವಕೀಲರಿಂದ,

1) ನಾನು 10 ನೇ ತರಗತಿವರಗೆ ಟಿ ನರಸೀಪುರದಲ್ಲಿ ವ್ಯಾಸಂಗ ಮಾಡಿರುತ್ತೇನೆ. ನಾನು ಮೈಸೂರಿನಲ್ಲಿ ಮೆಕ್ಯಾನಿಕ್ ಅಂಗಡಿಯನ್ನು ನಡೆಸುತ್ತಿದ್ದೇನೆ ಎಂದರೆ ಸರಿ. ನಾನು ಮೈಸೂರು ಸುಮಾರು 11 ವರ್ಷಗಳಿಂದ ವಾಸ ಮಾಡುತ್ತಿದ್ದೇನೆ. ನನಗೆ ಸಾಕ್ಷಿ ನುಡಿಯಲು ನ್ಯಾಯಾಲಯದಿಂದ ಸಮನ್ಸ ಬಂದಿರುವುದಿಲ್ಲ. ನಾನು ಮುಖ್ಯ ವಿಚಾರಣೆಯ ಪ್ರಮಾಣ ಪತ್ರ ಸಲ್ಲಿಸುವ ಕಾಲಕ್ಕೆ ಮೈಸೂರಿನಲ್ಲಿ ವಾಸವಾಗಿರುವುದಿಲ್ಲ ಎಂದು ವಕೀಲರಿಗೆ ತಿಳಿಸಿರುವುದಿಲ್ಲ. ನನಗೆ ಪ್ರತಿವಾದಿಗಳು ಸುಮಾರು 13 ವರ್ಷಗಳಿಂದ ಪರಿಚಯ ಇರುತ್ತಾರೆ. ಪ್ರತಿವಾದಿಗಳ ಕುಟುಂಬದ ಬಗ್ಗೆ ಸಂಪೂರ್ಣ ಮಾಹಿತಿ ಇರುವುದಿಲ್ಲ.

2) ವಾದಿಯ ತಂದೆ ತಾಯಿ ಹೆಸರುಗಳು ಗೊತ್ತಿರುವುದಿಲ್ಲ. ವಾದಿಯು ಬಡ್ಡಿ ವ್ಯಾಪಾರ ಮಾಡುತ್ತಿದ್ದಾರೆ ಎಂದು ನನಗೆ ಗೊತ್ತಿರುವುದಿಲ್ಲ. ವಾದಿ ಮತ್ತು ಪ್ರತಿವಾದಿಗಳ ನಡುವೆ ಯಾವ ದಿನಾಂಕದಂದು ಮಾತುಕತೆಯಾಯಿತು ಎಂದು ನನಗೆ ಗೊತ್ತಿರುವುದಿಲ್ಲ. ಪ್ರತಿವಾದಿಗಳ ಮನೆಯಲ್ಲಿ ವಾದಿಯ ಪರವಾಗಿ ಕರಾರು ಪತ್ರ ಬರೆದುಕೊಡುವ ಕಾಲಕ್ಕೆ ಮಾತುಕತೆ ಆಗಿರುವ ಬಗ್ಗೆ ನನಗೆ ಗೊತ್ತಿಲ್ಲ. ದಿಃ 26-08-2016 ರಂದು ನಾನು ವಾದಿಯ ಜೊತೆ ಮೈಸೂರಿನಿಂದ ಕೆ.ಆರ್.ನಗರಕ್ಕೆ ಬಂದಿರುತ್ತೇನೆ. ಮೈಸೂರಿನಿಂದ ನಾನು ಒಬ್ಬನೇ ವಾದಿಯ ಜೊತೆ ಬಂದಿರುತ್ತೇನೆ. ಸದರಿ ದಿನ ವಾದಿಯ ಜೊತೆ ನರಸಿಂಹರಾಜು ಮತ್ತು ಪ್ರಭುರವರು ಬಂದಿರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ.

3) ವಾದಿ ಮತ್ತು ಪ್ರತಿವಾದಿಗಳ ನಡುವೆ ರೂ. 5,00,000/- ಹಣವನ್ನು ಸಾಲವಾಗಿ ಪಡೆದುಕೊಂಡ ಬಗ್ಗೆ ಕರಾರು ಆಗಿರುತ್ತದೆ. ಸದರಿ ಕರಾರು ಪತ್ರ ಯಾರು ಬಳಿ ಇರುತ್ತದೆ ಎಂದು ನನಗೆ ಗೊತ್ತಿಲ್ಲ. ನಾನು ಯಾವುದೇ ಒಂದು ಪತ್ರಕ್ಕೆ ಸಹಿ ಮಾಡಬೇಕಾದರೆ ಓದಿ ತಿಳಿದುಕೊಂಡು ಸಹಿ ಮಾಡುತ್ತೇನೆ ಎಂದರೆ ಸರಿ. ನಿಶಾನೆ ಪಿ -01 ಕರಾರು ಪತ್ರದಲ್ಲಿ ಇರುವ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ 1(ಬಿ) ಎಂದು ಗುರುತಿಸಲಾಯಿತು. ನಾನು ನಿಪಿ-01 ಕರಾರು ಪತ್ರವನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ ಎಂದರೆ ಸರಿ.

4) ಪ್ರತಿವಾದಿಗಳು ವಾದಿಯ ಪರವಾಗಿ ನಿಪಿ-01 ಕರಾರು ಪತ್ರ ಹೊರತು ಪಡಿಸಿ ಬೇರೆ ದಾಖಲೆ ನೀಡಿರುವ ಬಗ್ಗೆ ನನಗೆ ಗೊತ್ತಿಲ್ಲ. ಸದರಿ ವಿಷಯ ಸಂಬಂಧವಾಗಿ ವಕೀಲರಿಗೆ ಮಾಹಿತಿ ನೀಡಿರುವುದಿಲ್ಲ. ಪ್ರತಿವಾದಿಗಳು ವಾದಿಗೆ ಯಾವ ದಿನಾಂಕದಂದು ಬಡ್ಡಿ ಹಣ ಮರುಪಾವತಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ. ಬಡ್ಡಿಯ ಹಣ ಪಾವತಿ ಮಾಡಿರುವ ಬಗ್ಗೆ ನಾನು ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ತಿಳಿಸಿರುವುದಿಲ್ಲ. ನಾನು ಸಾಮಾನ್ಯವಾಗಿ ಪತ್ರದಲ್ಲಿ ಖಂಡಿಕೆಗಳು ವಿರುದ್ಧವಾಗಿ ಇದ್ದರೆ ನಾನು ಸಹಿ ಮಾಡುವುದಿಲ್ಲ ಎಂದರೆ ಸರಿ. ದಾವಾ ಸ್ವತ್ತು ಪ್ರತಿವಾದಿ ಕುಟುಂಬಕ್ಕೆ ಯಾವ ರೀತಿ ಬಂದಿರುತ್ತದೆ ಎಂದು ನನಗೆ ಗೊತ್ತಿಲ್ಲ. ಪ್ರತಿವಾದಿ ಕುಟುಂಬದಲ್ಲಿ 1 ನೇ ಪ್ರತಿವಾದಿ ಕುಟುಂಬದ ನಿರ್ವಹಣೆ ಮಾಡುತ್ತಿದ್ದರು ಎಂದರೆ ಸರಿ. 2 ನೇ ಪ್ರತಿವಾದಿ ಗ್ರಾಮ ಪಂಚಾಯತಿಯ ಸದಸ್ಯರು ಮತ್ತು ಅಧ್ಯಕ್ಷರು ಆಗಿದ್ದರು ಎಂದರೆ ಸರಿ. ನಾನು ಮತ್ತು 2 ನೇ ಪ್ರತಿವಾದಿ ಸ್ನೇಹಿತರಾಗಿರುವ ಕಾರಣ ಅವರ ಪರವಾಗಿ ಸುಳ್ಳು ಸಾಕ್ಷವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಓದದೇ ಸಹಿ ಮಾಡಿರುತ್ತೇನೆ ಎಂದರೆ ಸರಿ.

5) ಪ್ರತಿವಾದಿಗಳು ದಾವಾ ಸ್ವತ್ತನ್ನು ವಾದಿಗೆ ಮಾರಾಟ ಮಾಡುತ್ತೇನೆ ಎಂದು ಒಪ್ಪಿ ಕರಾರು ಪತ್ರವನ್ನು ಬರೆದುಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಮತ್ತು ಇತರೆ ಸಾಕ್ಷಿದಾರರ ಸಮಕ್ಷಮ ವಾದಿಗೆ ಪ್ರತಿವಾದಿ 1 ಮತ್ತು 2 ರವರಿಗೆ ವಾದಿಯು 14,00,000/- ಪಾವತಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನಗೆ ನಿಪಿ-01 ಕರಾರು ಪತ್ರದ ಬಗ್ಗೆ ಸಂಪೂರ್ಣ ಮಾಹಿತಿ ಇದ್ದರೂ ಸಹ ಈಗ ನಾನು ಪ್ರತಿವಾದಿಗಳ ಪರವಾಗಿ ಸುಳ್ಳು ಸಾಕ್ಷಿಯನ್ನು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿ ನನ್ನನ್ನು ಬೇಟಿ ಮಾಡಿ ತನ್ನ ಪರವಾಗಿ ಸಾಕ್ಷಿ ನುಡಿಯುವಂತೆ ಕೇಳಿರುತ್ತಾರೆ ಎಂದರೆ ಸರಿಯಲ್ಲ. ನಾನು ಮತ್ತು ಜಗದೀಶ 2 ನೇ ಪ್ರತಿವಾದಿಯು ಸಹಿ ಮಾಡುವಂತೆ ಹೇಳಿದಾಗ ಸಹಿ ಮಾಡಿರುತ್ತೇನೆ. ನಾನು ವಾದಿಗೆ ತೊಂದರೆ ನೀಡುವ ಸಲುವಾಗಿ ಸುಳ್ಳು ಸಾಕ್ಷವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ